**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 13**
**ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ಅಧಿನಿಯಮ, 2016**
**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 3ನೇ ಪ್ರಕರಣದ ತಿದ್ದುಪಡಿ
3. 10ನೇ ಪ್ರಕರಣದ ತಿದ್ದುಪಡಿ


**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

**2016ರ ಅಧಿನಿಯಮ ಸಂಖ್ಯೆ 13.–**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994ನ್ನು,–

**(i)** ಆಯೋಗದ ರಚನೆಯಲ್ಲಿ ಅಲ್ಪಶಂಖ್ಯಾತ ಅಮುದಾಯವಾದ ಪಾರ್ಸಿಗಳ ಪ್ರಾತಿನಿಧ್ಯಕ್ಕಾಗಿ ಉಪಬಂಧ ಕಲ್ಪಿಸುವುದಕ್ಕೆ ಮತ್ತು

**(ii)** ಆಯೋಗಕ್ಕೆ ಸಿವಿಲ ನ್ಯಾಯಾಲಯದ ಅಧಿಕಾರವನ್ನು ಪ್ರಧಾನ ಮಾಡುವುದಕ್ಕೆ

– ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2016ರ ವಿಧಾನಸಭೆಯ ವಿಧೇಯಕ ಸಂಖ್ಯೆ 03:, ಕಡತ ಸಂಖ್ಯೆ:ಸಂವ್ಯಶಾಇ 09 ಶಾಸನ 2015)
(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 13**

(2016ರ ಏಪ್ರಿಲ್ ತಿಂಗಳ ಇಪ್ಪತ್ತಾರನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ಅಧಿನಿಯಮ, 2016**

(2016ರ ಏಪ್ರಿಲ್ ತಿಂಗಳ ಇಪ್ಪತ್ತೈದನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994ನ್ನು (1994ರ ಕರ್ನಾಟಕ ಅಧಿನಿಯಮ 31) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 31) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 3ನೇ ಪ್ರಕರಣದಲ್ಲಿ,-

(i) (2)ನೇ ಉಪಪ್ರಕರಣದ (ಎ) ಖಂಡದಲ್ಲಿ, "ಮತ್ತು ಸಿಖ್" ಎಂಬ ಪದಗಳಿಗೆ "ಸಿಖ್ ಮತ್ತು ಝೋರಾಸ್ಟ್ರಿಯನ್ (ಪಾರ್ಸಿ)" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ii) ಕೊನೆಯಲ್ಲಿ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಅಂಥ ಸದಸ್ಯರ ಪೈಕಿ ಕನಿಷ್ಠ ಪಕ್ಷ ಒಬ್ಬರು ಮಹಿಳೆಯಾಗಿರತಕ್ಕದ್ದು."

**3. 10ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 10ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"10ಎ. ಆಯೋಗದ ಅಧಿಕಾರಗಳು.-** 10ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ಹೇಳಿದ ಯಾವುವೇ ಪ್ರಕಾರ್ಯಗಳನ್ನು ನಿರ್ವಹಿಸುವಾಗ, ಆಯೋಗವು, ದಾವೆಯ ವಿಚಾರಣೆ ನಡೆಸುವ ಸಿವಿಲ್ ನ್ಯಾಯಾಲಯದ ಎಲ್ಲಾ ಅಧಿಕಾರಗಳನ್ನು, ವಿಶೇಷವಾಗಿ, ಈ ಮುಂದಿನ ವಿಷಯಗಳ ಸಂಬಂಧದಲ್ಲಿ ಹೊಂದಿರತಕ್ಕದ್ದು, ಎಂದರೆ:-

(ಎ) ರಾಜ್ಯದ ಯಾವುದೇ ಭಾಗದ ಯಾವೊಬ್ಬ ವ್ಯಕ್ತಿಗೆ ಸಮನು ನೀಡುವುದು ಮತ್ತು ಹಾಜರಾತಿಯನ್ನು ಒತ್ತಾಯಪಡಿಸುವುದು ಹಾಗೂ ಪ್ರಮಾಣದ ಮೇಲೆ ಆತನನ್ನು ವಿಚಾರಣೆ ಮಾಡುವುದು;

(ಬಿ) ಯಾವುದೇ ದಸ್ತಾವೇಜನ್ನು ಹುಡುಕುವುದು ಮತ್ತು ಹಾಜರುಪಡಿಸುವುದನ್ನು ಅಗತ್ಯಪಡಿಸುವುದು;

(ಸಿ) ಅಫಿದಾವಿತ್ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದು;

(ಡಿ) ಯಾವುದೇ ನ್ಯಾಯಾಲಯ ಅಥವಾ ಕಚೇರಿಯಿಂದ ಯಾವುದೇ ಸಾರ್ವಜನಿಕ ದಾಖಲೆ ಅಥವಾ ಅದರ ಪ್ರತಿಯನ್ನು ಕಡ್ಡಾಯವಾಗಿ ಕೋರುವುದು;

(ಇ) ಸಾಕ್ಷ್ಯಗಳು ಮತ್ತು ದಸ್ತಾವೇಜುಗಳ ಪರಿಶೀಲನೆಗಾಗಿ ಆಜ್ಞಾಪನೆಗಳನ್ನು (ಕಮೀಷನ್) ಹೊರಡಿಸುವುದು; ಮತ್ತು

(ಎಫ್) ನಿಯಮಿಸಬಹುದಾದ ಯಾವುದೇ ಇತರ ವಿಷಯ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ. ದ್ವಾರಕನಾಥ್ ಬಾಬು**

ಸರ್ಕಾರದ ವಿಶೇಷ ಕಾರ್ಯದರ್ಶಿ,

ಸಂಸದೀಯ ವ್ಯವಹಾರಗಳ ಇಲಾಖೆ